# ಕರ್ನಾಟಕ ವಿಧಾನಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

**ಚುಕ್ಕೆ ರಹಿತ ಪ್ರಶ್ನೆ**

ದಿನಾಂಕ : 26-03-2021 ಪ್ರಶ್ನೆ ಸಂಖ್ಯೆ : 1908(2259)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಎಂ. ಎ. ಗೋಪಾಲಸ್ವಾಮಿ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 26-03-2021

ಉತ್ತರಿಸುವ ಸಚಿವರು: ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು

ವಿಷಯ : ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗದಲ್ಲಿ ಅಭಿಯಂತರರ ಕೊರತೆ ಇರುವ ಬಗ್ಗೆ

(ಅ) ಹಾಸನ ಜಿಲ್ಲೆಯ ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗಕ್ಕೆ ಮಂಜೂರಾಗಿರುವ ತಾಂತ್ರಿಕ ಅಧಿಕಾರಿಗಳ (ವರ್ಕ್ಸ್ ಇನ್‌ಸ್ಪೆಕ್ಟರ್, ಕಿರಿಯ ಅಭಿಯಂತರರು, ಸಹಾಯಕ ಅಭಿಯಂತರರು, ಸಹಾಯಕ ಕಾರ್ಯಪಾಲಕ ಅಭಿಯಂತರರು, ಕಾರ್ಯಪಾಲಕ ಅಭಿಯಂತರರು ಇತ್ಯಾದಿ) ಹುದ್ದೆಗಳೆಷ್ಟು; ಭರ್ತಿಯಾಗಿರುವ ಹಾಗೂ ಖಾಲಿ ಇರುವ ಹುದ್ದೆಗಳೆಷ್ಟು; ಖಾಲಿ ಇರುವ ಹುದ್ದೆಗಳನ್ನು ಯಾವ ಕಾಲಮಿತಿಯೊಳಗೆ ಭರ್ತಿ ಮಾಡಲಾಗುವುದು; (ವಿವರ ನೀಡುವುದು)

(ಆ) ಹಾಸನ ಜಿಲ್ಲೆಯ ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗದಲ್ಲಿ ತಾಂತ್ರಿಕ ಅಧಿಕಾರಿಗಳ ಕೊರತೆಯಿಂದ ಗುತ್ತಿಗೆದಾರರಿಗೆ ಬಿಲ್‌ಗಳನ್ನು ಪಾಸ್ ಮಾಡಲು ಸಾಕಷ್ಟು ವಿಳಂಬವಾಗುತ್ತಿರುವುದು ಮತ್ತು ಇಲಾಖೆಯಿಂದ ಕೈಗೊಳ್ಳುತ್ತಿರುವ ಕಾಮಗಾರಿಗಳು ಕುಂಟುತ್ತಾ ಸಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಈ ಸಂಬಂಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು; (ವಿವರ ನೀಡುವುದು)

(ಇ) ಅಲ್ಲದೇ, ಜಿ.ಪಿ.ಎಸ್. ತಂತ್ರಾಂಶದ ಮೂಲಕ ಕಾಮಗಾರಿಗಳ ಸ್ಥಳ ಪರಿಶೀಲನೆ ಮಾಡಿ ಕಾಮಗಾರಿಗಳ ಪ್ರಗತಿ ವಿವರವನ್ನು ಗಾಂಧಿ ಸಾಕ್ಷಿ ಕಾಯಕ (GSK) ತಂತ್ರಾಂಶಕ್ಕೆ ಅಳವಡಿಸಬೇಕಾಗಿದ್ದು ಈ ಎರಡು ತಂತ್ರಾಂಶಗಳು ಸಹ ಸರಿಯಾಗಿ ಕಾರ್ಯನಿರ್ವಹಿಸಿದ ಕಾರಣ ತಾಂತ್ರಿಕ ಅಡಚಣೆಯಿಂದ ಎಲ್ಲಾ ಕಾರ್ಯಗಳು ನಿಧಾನಗತಿಯಲ್ಲಿ ಸಾಗುತ್ತಿದ್ದು, ಇದರಿಂದ ಇಲಾಖಾ ಅಧಿಕಾರಿಗಳು ಮತ್ತು ಗುತ್ತಿಗೆದಾರರಿಗೆ ಸಾಕಷ್ಟು ತೊಂದರೆಗಳಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಸಂಬಂಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು? (ವಿವರ ನೀಡುವುದು)